## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 204 |
| ಸದಸ್ಯರ ಹೆಸರು | ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 14.12.2021 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕೊಡಗು ಜಿಲ್ಲೆಯಲ್ಲಿ ಎಷ್ಟು ಎಂ-ಸ್ಯಾಂಡ್ ಘಟಕಗಳು ಪ್ರಸ್ತುತ, ಕಾರ್ಯ ನಿರ್ವಹಿಸುತ್ತಿವೆ; ಅವುಗಳ ಪ್ರತಿ ದಿನದ ಎಂ-ಸ್ಯಾಂಡ್ ಉತ್ಪಾದನಾ ಸಮಾರ್ಥ್ಯ ಎಷ್ಟು; | ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ 04 ಕ್ರಷರ್ ಘಟಕಗಳಲ್ಲಿ ಎಂ-ಸ್ಯಾಂಡ್ ಉತ್ಪಾದಿಸಲಾಗುತ್ತಿದೆ. ಸದರಿ 04 ಸ್ಟೋನ್ ಕ್ರಷರ್ ಘಟಕಗಳಿಂದ ಪ್ರತಿ ದಿನ ಅಂದಾಜು 150 ಮೆಟ್ರಿಕ್ ಟನ್ ಎಂ-ಸ್ಯಾಂಡ್ ನ್ನು ಪೂರೈಸಲಾಗುತ್ತದೆ.<br>ಇದಲ್ಲದೆ ನೆರೆಯ ಹಾಸನ ಮತ್ತು ಮೈಸೂರು ಜಿಲ್ಲೆಗಳಿಂದ ಕೊಡಗು ಜಿಲ್ಲೆಗೆ ಎಂ-ಸ್ಯಾಂಡ್ ಸಾಗಾಣಿಕೆಯಾಗುತ್ತಿರುತ್ತದೆ. |
| (ಆ) | ಜಿಲ್ಲೆಯಲ್ಲಿನ ಬೇಡಿಕೆಗೆ ಅನುಗುಣವಾಗಿ ಎಂ-ಸ್ಯಾಂಡ್ ಸಾಮಗ್ರಿಗಳು ಹಾಲಿ ಕಾರ್ಯ ನಿರ್ವಹಿಸುತ್ತಿರುವ ಎಂ-ಸ್ಯಾಂಡ್ ಘಟಕಗಳಿಂದ ಉತ್ಪಾದನೆಯಾಗುತ್ತಿದೆಯೇ; | ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ 04 ಕ್ರಷರ್ ಘಟಕಗಳಲ್ಲಿ ಎಂ-ಸ್ಯಾಂಡ್ ಉತ್ಪಾದಿಸಲಾಗುತ್ತಿದೆ. ಇದಲ್ಲದೆ ನೆರೆಯ ಹಾಸನ ಮತ್ತು ಮೈಸೂರು ಜಿಲ್ಲೆಗಳಿಂದ ಕೊಡಗು ಜಿಲ್ಲೆಗೆ ಎಂ-ಸ್ಯಾಂಡ್ ಸಾಗಾಣಿಕೆಯಾಗುತ್ತಿರುತ್ತದೆ. |
| (ಇ) | ಜಿಲ್ಲೆಯಲ್ಲಿನ ಬೇಡಿಕೆಗೆ ಅನುಗುಣವಾಗಿ ಎಂ-ಸ್ಯಾಂಡ್ ಸಾಮಗ್ರಿ, ಎಂ-ಸ್ಯಾಂಡ್ ಘಟಕಗಳಿಂದ ಉತ್ಪಾದನೆ ಯಾಗದಿದ್ದಲ್ಲಿ ನಿರ್ಮಾಣ ಕಾಮಗಾರಿಗಳಿಗೆ ತೊಂದರೆ ಯಾಗದಂತೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು? | ಕೊಡಗು ಜಿಲ್ಲೆಯಲ್ಲಿನ ಸಾರ್ವಜನಿಕ ಮತ್ತು ಸರ್ಕಾರಿ ಕಾಮಗಾರಿಗಳಿಗೆ ಮರಳು ಪೂರೈಸುವ ಸಂಬಂಧ 17 ನದಿ ಮರಳು ಬ್ಲಾಕ್ ಗಳನ್ನು ಗುರುತಿಸಿ, ಗುತ್ತಿಗೆ ಮಂಜೂರಾತಿ ನೀಡಲಾಗಿರುತ್ತದೆ.<br>ಈ ಮರಳು ಬ್ಲಾಕುಗಳಿಂದ ವಾರ್ಷಿಕವಾಗಿ ಒಟ್ಟು 68,650 ಮೆಟ್ರಿಕ್ ಟನ್ ಪ್ರಮಾಣದ ನದಿ ಮರಳನ್ನು ಪೂರೈಸಲಾಗುತ್ತಿದೆ.<br>ಕೊಡಗು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ 04 ಎಂ-ಸ್ಯಾಂಡ್ ಘಟಕಗಳಿಂದ ಪ್ರತಿ ದಿನ ಅಂದಾಜು 150 ಮೆಟ್ರಿಕ್ ಟನ್ ಪ್ರಮಾಣದ ಎಂ-ಸ್ಯಾಂಡ್ ಉತ್ಪಾದಿಸಿ, ಸರಬರಾಜು ಮಾಡಲಾಗುತ್ತಿದೆ.<br>ಇದಲ್ಲದೆ ನೆರೆಯ ಹಾಸನ, ಚಾಮರಾಜನಗರ, ಮಂಡ್ಯ ಮತ್ತು ಮೈಸೂರು ಜಿಲ್ಲೆಗಳಿಂದ ಕೊಡಗು ಜಿಲ್ಲೆಗೆ ಪ್ರತಿ ದಿನ ಅಂದಾಜು 200 ಮೆಟ್ರಿಕ್ ಟನ್ ಪ್ರಮಾಣದ ಎಂ-ಸ್ಯಾಂಡ್ ಸಾಗಾಣಿಕೆಯಾಗುತ್ತಿದ್ದು, ಜಿಲ್ಲೆಯ ನಿರ್ಮಾಣ ಕಾಮಗಾರಿಗಳಿಗೆ ಮರಳಿನ ಅಭಾವವಿರುವುದಿಲ್ಲ. |